ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

(18)

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 9/3/21

# ಇದು ಸಮತೋಲಿತ ಬಜೆಟ್: ಸಿಎಂ

## ಯಾರಿಗೂ ಹೊರೆಯಾಗದ 'ಸರ್ವವ್ಯಾಪಿ, ಸರ್ವಸ್ಪರ್ಶಿ' ಜನಸ್ನೇಹಿ ಬಜೆಟ್

9/3/21

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಅಭಿವೃದ್ಧಿ ಮತ್ತು ಜನ ಕಲ್ಯಾಣ ಕಾರ್ಯಕ್ರಮಗಳಿಗೆ ಅನುದಾನದ ಕೊರತೆಯಾಗದ, ಯಾರಿಗೂ ಹೊರೆಯಾಗದ 'ಜನಸ್ನೇಹಿ, ಸಮತೋಲಿತ, ಸರ್ವವ್ಯಾಪಿ, ಸರ್ವಸ್ಪರ್ಶಿ' ಬಜೆಟ್ ಮಂಡಿಸಲಾಗಿದೆ. ಇದು ಈ ಸಂಕಷ್ಟದ ಸವಾಲುಗಳಿಗೆ ಪರಿಹಾರವಾಗಬಲ್ಲ ಸಮತೋಲಿತ ಬಜೆಟ್ ಎಂದು ಹಣಕಾಸು ಖಾತೆಯನ್ನು ಹೊಂದಿರುವ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದ್ದಾರೆ.



ಸೋಮವಾರ 2021-22ನೇ ಸಾಲಿನ ಆಯವ್ಯಯ ಮಂಡನೆ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅತ್ಯಂತ ಸಂಕಷ್ಟದ ಸನ್ನಿವೇಶದಲ್ಲಿ ರೂಪಿಸಲಾದ ಆಯವ್ಯಯ ಇದಾಗಿದೆ. ನೈಸರ್ಗಿಕ ವಿಕೋಪ, ಪ್ರವಾಹ, ಕೋವಿಡ್-19 ಕಾರಣದಿಂದ ಇಡೀ ರಾಜ್ಯ ತಲ್ಲಣಗೊಂಡು ಆರ್ಥಿಕ ಚಟುವಟಿಕೆಸ್ಥಗಿತಗೊಂಡ ಕಾರಣ ಆರ್ಥಿಕ ಚಟುವಟಿಕೆ ನಡೆಯದೆ ರಾಜಸ್ವ ಸಂಗ್ರಹಣೆಗೆ ದೊಡ್ಡ ಹೊಡತ ಬಿದ್ದಿತ್ತು. ಇಂಥ ಸಂದರ್ಭದಲ್ಲಿ ಸಂಬಳ, ಪಿಂಚಣಿ, ಸಾಲ ಮರು ಪಾವತಿ ಇತ್ಯಾದಿ ಬದ್ಧ ವೆಚ್ಚಗಳನ್ನು ಸಕಾಲದಲ್ಲಿ ಪಾವತಿಸಿ ಅಭಿವೃದ್ಧಿಗೆ ಅನುದಾನ ಒದಗಿಸಿದ್ದೇನೆ. ಕಳೆದ ವರ್ಷದ ಆಯವ್ಯಯದಲ್ಲಿ ಶೇ.85ರಷ್ಟು ಸಾಧನೆ ಆಗಬಹುದೆಂದು ಅಂದಾಜಿಸಲಾಗಿತ್ತು. ಆದರೆ ಈಗ ಶೇ.94ರಷ್ಟು ಸಾಧಿಸುವ ಭರವಸೆ ನಮಗಿದೆ ಎಂದು ಸಮಾಧಾನ ವ್ಯಕ್ತಪಡಿಸಿದರು.

ಆಯವ್ಯಯದಲ್ಲಿ ಎಲ್ಲ ವರ್ಗ, ಎಲ್ಲ ವಲಯ ಹಾಗೂ ಎಲ್ಲ ಜಿಲ್ಲೆಗಳಿಗೆ ಪ್ರಾಮುಖ್ಯತೆ ನೀಡುವ ಮೂಲಕ ಸಮತೋಲನ ಕಾಯ್ದುಕೊಳ್ಳುವ ಪ್ರಾಮಾಣಿಕ ಪ್ರಯತ್ನ ಮಾಡಿರುವುದಾಗಿ ಹೇಳಿದರು.

**ತೈಲಕ್ಕೆ ದೇಶದಲ್ಲೇ ಕಡಿಮೆ ತೆರಿಗೆ:** ದೇಶದ ಬೇರೆ ರಾಜ್ಯಗಳಿಗೆ ಹೋಲಿಸಿದರೆ ರಾಜ್ಯದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ತೆರಿಗೆ ಕಡಿಮೆ ಇದೆ. ಜನರಿಗೆ ಹೊರೆಯಾಗಬಾರದೆಂದು ಯಾವುದೇ ತೆರಿಗೆ ಹೆಚ್ಚಿಸಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.